# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 11 (50) |
| 2) | ಮಾನ್ಯ ಸದಸ್ಯರ ಹೆಸರು | ಡಾ: ಚಂದ್ರಶೇಖರ ಬಿ.ಪಾಟೀಲ (ಪದವೀಧರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 13.02.2023 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಲ್ಲಿ ಸರ್ಕಾರ ಎಷ್ಟು ಉದ್ಯೋಗ ಮೇಳಗಳನ್ನು ಏರ್ಪಡಿಸಲಾಗಿದೆ ಮತ್ತು ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಿಕೊಡಲಗಿದೆ: (ವಿವರ ನೀಡುವುದು) | **<u>ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)</u>**<br>ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು 06 ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿದ್ದು, 135 ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ.<br>ವಿವರ :<br>ಆರ್ಥಿಕ ವರ್ಷ / ಉದ್ಯೋಗ ಮೇಳದ ವಿವರ / ಉದ್ಯೋಗಾವಕಾಶ ಕಲ್ಪಿಸಲಾದ ಉದ್ಯೋಗಾಕಾಂಕ್ಷಿಗಳ ಸಂಖ್ಯೆ:<br>2020-21 / 1 / 11<br>2021-22 / 2 / 27<br>2022-23 / 3 / 97 |
| (ಆ) ಕಲ್ಯಾಣ ಕರ್ನಾಟಕದ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು: | **<u>ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)</u>**<br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ರಾಜ್ಯದಾದ್ಯಂತ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಶ ಯೋಜನೆಗಳನ್ನು ಜಾರಿಗೊಳಸಲಾಗಿದ್ದು, ಕಲ್ಯಾಣ ಕರ್ನಾಟಕದ ಭಾಗಕ್ಕೆ ಪತ್ಯೇಕವಾಗಿ ಯಾವುದೇ ಯೋಜನೆಗಳನ್ನು ಜಾರಿಗೊಳಸಲಾಗಿರುವುದಿಲ್ಲ. ಆದಾಗ್ಯೂ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ತರಬೇತುದಾರ ಸಂಸ್ಥೆಗಳ ಮೂಲಕ ತರಬೇತಿ ಪಡೆದ ಅಭ್ಯರ್ಥಿಗಳ ಪೈಕಿ ಶೇ 70 ರಷ್ಟು ಅಭ್ಯರ್ಥಿಗಳಿಗೆ ಉದ್ಯೋಗವಕಾಶ ಕಲ್ಪಿಸುವ ಷರತ್ತು ವಿಧಿಸಲಾಗಿದ್ದು, ಈ ಮೂಲಕ ಕಲ್ಯಾಣ ಕರ್ನಾಟಕ ಭಾಗದ 2759 ಅಭ್ಯರ್ಥಿಗಳಿಗೆ ಉದ್ಯೋಗವಕಾಶ ಕಲ್ಪಿಸಲಾಗಿದೆ. ಅದರಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ನಡೆಸಲಾದ ಉದ್ಯೋಗ ಮೇಳಗಳ ಮೂಲಕ 4755 ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ.<br><br>**<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)</u>**<br>ಕಲ್ಯಾಣ ಕರ್ನಾಟಕದ ಭಾಗದಲ್ಲಿ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ಪ್ರಮುಖವಾಗಿ ಗ್ರಾಮೀಣ ಪ್ರದೇಶದ ಮಹಿಳೆಯರನ್ನು ಸ್ವ-ಸಹಾಯ ಗುಂಪುಗಳಾಗಿ ಸಂಘಟಿಸುವ ಮೂಲಕ ಅವರ ಸಾಮರ್ಥ್ಯ ಅಭಿವೃದ್ಧಿಗೊಳಿಸಿ ಜೀವನೋಪಾಯ ಉದ್ಯೋಗವನ್ನು ಕಲ್ಪಿಸುವ ಉದ್ದೇಶದಿಂದ ಈ ಕೆಳಕಂಡ ಕಾರ್ಯಕ್ರಮಗಳಡಿ ವಿವಿಧ ರೀತಿಯ ಯೋಜನಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. |

**ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯು ರಾಷ್ಟ್ರೀಯ ಜೀವನೋಪಾಯ ಅಭಿಯಾನ ಕಾರ್ಯಕ್ರಮದಡಿ** ರಾಜ್ಯದ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು,

ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿನ ಗ್ರಾಮೀಣ ಭಾಗದ ಎಲ್ಲಾ ಬಡ ಕುಟುಂಬದಿಂದ ಓರ್ವ ಮಹಿಳೆಯನ್ನು ಸ್ವ-ಸಹಾಯ ಗುಂಪಿನಡಿ ಸಂಘಟಿಸುವ ಮೂಲಕ ಜೀವನೋಪಾಯ ಸ್ವ-ಉದ್ಯೋಗಗಳನ್ನು ಕಲ್ಪಿಸುವ ಗುರಿ ಮತ್ತು ಉದ್ದೇಶದಿಂದ ಸ್ವ-ಸಹಾಯ ಗುಂಪಿಗೆ ಸೇರಿಸಲು ಕ್ರಮವಹಿಸಲಾಗಿದೆ. ಮಹಿಳೆಯರಿಗೆ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಸೂಕ್ತ ತರಬೇತಿ ಹಾಗೂ ಹಣಕಾಸು ಸೌಲಭ್ಯಗಳನ್ನು ಒದಗಿಸುವ ಮೂಲಕ ಅವರ ಹಾಗೂ ಅವರ ಕುಟುಂಬದ ಆರ್ಥಿಕ ಉತ್ತೇಜನಕ್ಕೆ ಕ್ರಮ ಕೈಗೊಳ್ಳಲಾಗಿದೆ.

ಪ್ರಮುಖವಾಗಿ, ಸ್ವಸಹಾಯ ಗುಂಪುಗಳ ಸದಸ್ಯರುಗಳಿಗೆ ಭಾರತ ಸರ್ಕಾರದ ಮಾರ್ಗಸೂಚಿಗಳಂತೆ ನಿರುದ್ಯೋಗ ಸಮಸ್ಯೆಯಿಂದ ಹೊರಬರಲು ಹಾಗೂ ಕುಟುಂಬದ ಆರ್ಥಿಕ ಪ್ರಗತಿಗಾಗಿ ಜೀವನೋಪಾಯ ಉದ್ಯೋಗಗಳನ್ನು ಕೈಗೊಳ್ಳಲು ಸಮುದಾಯ ಬಂಡವಾಳ ನಿಧಿ, ಸುತ್ತು ನಿಧಿ, ಬ್ಯಾಂಕ್ ಲಿಂಕೇಜ್ ಸೌಲಭ್ಯಗಳನ್ನು ಒದಗಿಸಲಾಗಿದೆ. ಹಣಕಾಸು ಸೇರ್ಪಡೆ, ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಸೂಕ್ತ ತರಬೇತಿಗಳನ್ನು ಏರ್ಪಡಿಸಿ ನರೇಗಾಯೋಜನೆ ಸೇರಿದಂತೆಇತರೆ ಇಲಾಖೆಗಳಡಿ ದೊರೆಯುವ ಸೌಲಭ್ಯಗಳನ್ನು ಒಗ್ಗೂಡಿಸುವಿಕೆ ವೇದಿಕೆಯಡಿ ಅನುಕೂಲ ಕಲ್ಪಿಸಿದೆ.

**ಸಮುದಾಯ ಬಂಡವಾಳ ನಿಧಿ:-**(ಸಿ.ಐ.ಎಫ್) ಒಕ್ಕೂಟಗಳ ಸುಸ್ಥಿರತೆಯೊಂದಿಗೆ ಜೀವನೋಪಾಯ ಉದ್ಯೋಗಗಳನ್ನು ಕೈಗೊಳ್ಳಲು ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಅನುಕೂಲ ಒದಗಿಸುವ ದೃಷ್ಟಿಯಿಂದ ಕಡಿಮೆ ಬಡ್ಡಿದರದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಒಕ್ಕೂಟದ ಮೂಲಕ ರೂ.1.50 ಲಕ್ಷ ಸಮುದಾಯ ಬಂಡವಾಳ ನಿಧಿಯನ್ನು ನೀಡಲಾಗುತ್ತಿದೆ. ಈ ಮೊತ್ತವು ಗುಂಪುಗಳಲ್ಲಿ ನಿರಂತರವಾಗಿ ಲಭ್ಯವಿರುತ್ತದೆ. ಅಲ್ಲದೇ ಸ್ವ-ಸಹಾಯ ಗುಂಪುಗಳಿಗೆ ಬ್ಯಾಂಕ್ ಲಿಂಕೇಜ್ ಮೂಲಕ ಅವಶ್ಯಕ ಸಾಲ-ಸೌಲಭ್ಯ ಒದಗಿಸಲಾಗುತ್ತಿದೆ.

ಮುಂದುವರೆದು, ಸ್ವಸಹಾಯ ಗುಂಪಿನ ಸದಸ್ಯರು ಉತ್ಪಾದಿಸುತ್ತಿರುವ ಉತ್ಪನ್ನಗಳಿಗೆ ಮಾಸಿಕ ಸಂತೆ, ಸರಸ್ ಮೇಳದಲ್ಲಿ ಭಾಗವಹಿಸಲು ಅನುಕೂಲ ಒದಗಿಸಲಾಗಿದೆ. ಆಯ್ದ ಉತ್ಪನ್ನಗಳಿಗೆ ಅಮೇಜಾನ್, ಫ್ಲಿಪ್‌ಕಾರ್ಟ್, ಮಿಶೋ ಮತ್ತು ಕಲ್ಚರ್‌ಸ್ಟ್ರೀಟ್ ನಂತಹ ಆನ್‌ಲೈನ್ ಮಾರಾಟ ವೇದಿಕೆಗಳನ್ನು ಕಲ್ಪಿಸಲಾಗಿದೆ.

- ಸಹಭಾಗಿತ್ವದಲ್ಲಿ ಸಂಜೀವಿನಿ ಕರ್ನಾಟಕ 6 ಜಿಲ್ಲೆಗಳಾದ್ಯಂತ ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಉನ್ನತೀಕರಣ ಮತ್ತು ಔಪಚಾರಿಕರಣ ಕಾರ್ಯಕ್ರಮದಡಿ ಇಲ್ಲಿಯವರೆಗೆ 632 ಫಲಾನುಭವಿಗಳಿಗೆ ಮೂಲ ಬಂಡವಾಳ ತಲಾ ರೂ. 40000 ಒಟ್ಟು 2.51 ಕೋಟಿ ಒದಗಿಸಲಾಗಿದೆ.
- ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿನಲ್ಲಿ ಆರಂಭಿಕ ಗ್ರಾಮೀಣ ಉದ್ಯಮ ಯೋಜನೆಯನ್ನು ಅನುಷ್ಠಾನಗೊಳಿಸುವ ಮೂಲಕ ಮುಂದಿನ 3 ವರ್ಷಗಳಲ್ಲಿ 2000 ಮಹಿಳೆಯರನ್ನು ಉದ್ಯಮದಾರರನ್ನಾಗಿ ಬೆಳೆಸುವ ಉದ್ದೇಶ ಹೊಂದಲಾಗಿದೆ.
- ಗ್ರಾಮೀಣ ಸ್ವಯಂ ತರಬೇತಿ ಯೋಜನೆಯಡಿ (ಆರ್‌ಸೆಟಿ) ಕೌಶಲ್ಯ ತರಬೇತಿಗಳನ್ನು ಹಮ್ಮಿಕೊಳ್ಳುವುದಷ್ಟೆಯಲ್ಲದೇ ಸ್ವ-ಉದ್ಯೋಗ ಕೈಗೊಳ್ಳಲು ಬ್ಯಾಂಕ್ ಲಿಂಕೇಜ್ ಒದಗಿಸಿ ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸಲು ನಿರಂತರ ಕ್ರಮ ಜರುಗಿಸಲಾಗುತ್ತಿದೆ.
- ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಬೀದರ್ ಹೊರತುಪಡಿಸಿ ಇತರೆ 5 ಜಿಲ್ಲೆಗಳಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿಗಳನ್ನು ಯೋಜನಾ ಅನುಷ್ಠಾನ ಸಂಸ್ಥೆಯ ಮೂಲಕ ಹಮ್ಮಿಕೊಂಡು ತರಬೇತಿಯ ನಂತರ ಉದ್ಯೋಗ ಕಲ್ಪಿಸಲಾಗುತ್ತಿದೆ.

ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಸಂಜೀವಿನಿ ಸ್ವಸಹಾಯ ಗುಂಪಿಗಳ ವ್ಯಾಪ್ತಿಗೆ ತರಲಾಗಿರುವ ಫಲಾನುಭವಿಗಳ ವಿವರ ಈ ಕೆಳಗಿನಂತಿದೆ.

| ಕ್ರ ಸಂ | ಜಿಲ್ಲೆಯ ಹೆಸರು | ಸಂಜೀವಿನಿ ವ್ಯಾಪ್ತಿಗೆ ತರಲಾಗಿರುವ ಕುಟುಂಬಗಳ ಸಂಖ್ಯೆ | ಸಮುದಾಯ ಬಂಡವಾಳ ನಿಧಿ ಪಡೆದಿರುವ ಸ್ವಸಹಾಯ ಗುಂಪುಗಳ ಸಂಖ್ಯೆ | ವಿತರಿಸಿದ ಸಮುದಾಯ ಬಂಡವಾಳ ನಿಧಿಯ ಮೊತ್ತ (ರೂ. ಕೋಟಿಗಳಲ್ಲಿ | ಬ್ಯಾಂಕ್ ಲಿಂಕೇಜ್ ಪಡೆದ ಸ್ವಸಹಾಯ ಗುಂಪುಗಳ ಸಂಖ್ಯೆ | ಬ್ಯಾಂಕ್ ಲಿಂಕೇಜ್ ಮೊತ್ತ (ರೂ. ಕೋಟಿಗಳಲ್ಲಿ) | ಸುತ್ತುನಿಧಿ ಪಡೆದ ಸ್ವಸಹಾಯ ಗುಂಪುಗಳ ಸಂಖ್ಯೆ | ಸುತ್ತು ನಿಧಿ ವಿತರಿಸಿದ ಮೊತ್ತ (ರೂ. ಕೋಟಿಗಳಲ್ಲಿ |
|---|---|---|---|---|---|---|---|---|
| 1 | ಬೀದರ್ | 91838 | 2600 | 22.21 | 61867 | 1681.44 | 1107 | 166.05 |
| 2 | ಕಲಬುರ್ಗಿ | 96162 | 2060 | 24.31 | 58473 | 858.71 | 1701 | 255.15 |
| 3 | ಯಾದಗಿರಿ | 41149 | 1299 | 13.66 | 20262 | 310.17 | 1111 | 165.45 |
| 4 | ರಾಯಚೂರು | 60474 | 1189 | 15.18 | 68110 | 948.24 | 1349 | 202.10 |
| 5 | ಕೊಪ್ಪಳ | 87200 | 3088 | 27.47 | 65109 | 1307.18 | 1874 | 280.75 |
| 6 | ಬಳ್ಳಾರಿ | 52091 | 2782 | 29.05 | 81353 | 1707.23 | 1432 | 214.80 |

ಪ್ರಮುಖವಾಗಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿನ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವ ಸ್ತ್ರೀ ಸಾಮರ್ಥ್ಯ ಯೋಜನೆಯಡಿ ಪ್ರತಿ ಜಿಲ್ಲೆಗೊಂದು ಕ್ಯಾಂಟೀನ್ ಮತ್ತು ಸ್ಯಾನಿಟರಿ ಘಟಕ ಸ್ಥಾಪನೆ ಮತ್ತು ಪ್ರತಿ ತಾಲ್ಲೂಕಿನಲ್ಲಿ ಸ್ತ್ರೀ ಸಾಮರ್ಥ್ಯ ಮಳಿಗೆಗಳನ್ನು ಸ್ಥಾಪಿಸಲು ಯೋಜನೆ ರೂಪಿಸಲಾಗಿರುತ್ತದೆ. ಸ್ತ್ರೀ ಸಾಮರ್ಥ್ಯ ಯೋಜನೆಯಡಿ ಒಟ್ಟಾರೆ ಸ್ವಸಹಾಯ ಗುಂಪಿನ ಮಹಿಳೆಯರು ವಿವಿಧ ಉತ್ಪನ್ನಗಳಲ್ಲಿ ತೊಡಗಿಸಲು ಅನುಕೂಲವಾಗುವಂತೆ ಮಸಾಲ ಉತ್ಪನ್ನಗಳು, ರೊಟ್ಟಿ ತಯಾರಿಕೆ, ಜೂಟ್ ಬ್ಯಾಗ್ ತಯಾರಿಕೆ, ಹರ್ಬಲ್ ಸೋಪ್ ಮುಂತಾದ 15 ತಯಾರಿಕಾ ಘಟಕಗಳನ್ನು ಸ್ಥಾಪಿಸಲು ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಒಟ್ಟು 9355 ಫಲಾನುಭವಿಗಳನ್ನು ಗುರುತಿಸಲಾಗಿದ್ದು, ತಲಾ 1.00 ಲಕ್ಷ ವಿಶೇಷ ಸಮುದಾಯ ಬಂಡವಾಳ ನಿಧಿಯನ್ನು ವಿತರಿಸಿ ತಾಂತ್ರಿಕ ಬೆಂಬಲ ನೀಡಲಾಗುವುದು. ಒಟ್ಟಾರೆ ಮಹಿಳೆಯರು ಮತ್ತು ಅವರ ಕುಟುಂಬ ಸದಸ್ಯರುಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡುವ ಮೂಲಕ ಪ್ರತಿಯೊಂದು ಕುಟುಂಬವು ಒಂದಕ್ಕಿಂತ ಹೆಚ್ಚು ಜೀವನೋಪಾಯ ಉದ್ಯೋಗಳ ಸೌಲಭ್ಯಗಳನ್ನು ಒದಗಿಸುವ ಮೂಲಕ ಆರ್ಥಿಕವಾಗಿ ಸಧೃಡವಾಗಲು ನಿರಂತರ ಬೆಂಬಲ ನೀಡಲಾಗುತ್ತಿದೆ.

## ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಎನ್.ಯು.ಎಲ್.ಎಂ)

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಡೇ-ಎನ್‌ಯುಎಲ್‌ಎಂ ಅಭಿಯಾನದ ಸ್ವಯಂ ಉದ್ಯೋಗ ಕಾರ್ಯಕ್ರಮ ಮತ್ತು ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ ಉಪಘಟಕದಡಿ ಫಲಾನುಭವಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಕಲ್ಪಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಸಲಾಗುತ್ತಿರುತ್ತದೆ.

**1)ಸ್ವಯಂ ಉದ್ಯೋಗ ಕಾರ್ಯಕ್ರಮ:**

ಸದರಿ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು ಹಾಗೂ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುವುದು.

**2)ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ:**

ಸದರಿ ಉಪಘಟಕದಡಿ ನಗರದ ನಿರುದ್ಯೋಗ ಯುವಕ / ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಿ, ಪ್ರಮಾಣೀಕರಣ ಮತ್ತು ಮೌಲ್ಯಮಾಪನವನ್ನು ಕೈಗೊಂಡು, ಕೇಂದ್ರ ಸರ್ಕಾರದ ಪ್ರಮಾಣ ಪತ್ರವನ್ನು ನೀಡಿ, ತರಬೇತಿಯನ್ನು ಪಡೆದುಕೊಂಡ ಶೇ.70 ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು.

| | |
|---|---|
| | 3) 'ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ'ಯ **(PM SVANidhi)** 'ವಿಶೇಷ ಕಿರು ಸಾಲ ಸೌಲಭ್ಯ ಯೋಜನೆ' **(Special Micro Credit facility Scheme)**<br>ಕೋವಿಡ್-19 ಅವಧಿಯಲ್ಲಿ ತೊಂದರೆಗೊಳಗಾದ ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸಬಲೀಕರಣಕ್ಕಾಗಿ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ನವದೆಹಲಿ ರವರು ಮೇ 14, 2020 ರಂದು ಕೋವಿಡ್-19ರ ಪರಿಣಾಮವಾಗಿ ಬೀದಿ ವ್ಯಾಪಾರಿಗಳಿಗೆ ಅಗತ್ಯ ಹಣಕಾಸು ಸಾಲ ಸೌಲಭ್ಯ ನೀಡುವ ಸಂಬಂಧ ರಾಷ್ಟ್ರ ಮಟ್ಟದಲ್ಲಿ ಪ್ಯಾಕೇಜ್‌ನ್ನು ಘೋಷಿಸಲಾಗಿರುತ್ತದೆ. ಅದರಂತೆ ರಾಜ್ಯದಲ್ಲಿ 'ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ'ಯ **(PM SVANidhi)** 'ವಿಶೇಷ ಕಿರು ಸಾಲ ಸೌಲಭ್ಯ ಯೋಜನೆ' **(Special Micro Credit facility Scheme)** ಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br><u>ಕಾರ್ಯಕ್ರಮಗಳ ವಿವರ</u><br>• ಬೀದಿ ವ್ಯಾಪಾರಸ್ಥರಿಗೆ ಕೈಗೆಟಕುವ ದರದಲ್ಲಿ ಕಿರು ಸಾಲ ಸೌಲಭ್ಯವನ್ನು ರೂ.10,000/- ದವರೆಗೆ ನೀಡುವುದು.<br>• ಪ್ರಥಮ ಹಂತದ ಸಾಲವನ್ನು ಸದರಿ ಯೋಜನೆಯಡಿ ಬ್ಯಾಂಕುಗಳಿಂದ ಪಡೆದು ನಿಯಮಿತವಾಗಿ ಮರುಪಾವತಿ ಮಾಡಿದ ಫಲಾನುಭವಿಗಳು 2ನೇ ಹಂತದ ರೂ.20,000/- ವರೆಗಿನ ಸಾಲಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ.<br>• 2ನೇ ಹಂತದ ರೂ.20,000/- ವರೆಗಿನ ಸಾಲಸೌಲಭ್ಯವನ್ನು ಪಡೆದುಕೊಂಡು ನಿಯಮಿತವಾಗಿ ಮರುಪಾವತಿ ಮಾಡಿದ ಫಲಾನುಭವಿಗಳು 3ನೇ ಹಂತದ ರೂ.50,000/- ವರೆಗಿನ ಸಾಲಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ.<br>• ನಿಯಮಿತ ಸಾಲ ಮರುಪಾವತಿಗೆ ಉತ್ತೇಜಿಸುವುದು.<br>• ಡಿಜಿಟಲ್ ವಹಿವಾಟಿಗೆ ಉತ್ತೇಜನ ಮತ್ತು ಬಹುಮಾನ. |
| (ಇ) ಉದ್ಯೋಗ ಸೃಷ್ಟಿಸುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮವೇನು? | <u>**ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**</u><br><br>ಒಂದು ಜಿಲ್ಲೆ ಒಂದು ಕೌಶಲ್ಯ (One District One Skill) : ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದಿಂದ ಈಗಾಗಲೇ "ಒಂದು ಜಿಲ್ಲೆ ಒಂದು ಕೌಶಲ್ಯ" ಎಂಬ ಶೀರ್ಷಿಕೆಯಡಿ ಕಾರ್ಯಕ್ರಮವನ್ನು ರೂಪಿಸಲಾಗಿದ್ದು, ರಾಜ್ಯದ 31 ಜಿಲ್ಲೆಗಳಲ್ಲಿ ಆಯಾ ಜಿಲ್ಲೆಯಲ್ಲಿ ಚಾರಿಯಲ್ಲಿರುವ ಪಾರಂಪರಿಕ ಕುಲವೃತ್ತಿಗಳಿಂದು ಗುರುತಿಸಲ್ಪಟ್ಟಿರುವ ವೃತ್ತಿ / ಕಲೆಗಳಡಿ ಆಯಾ ಜಿಲ್ಲೆಯ ಕನಿಷ್ಠ 100 ಕುಶಲಕರ್ಮಿಗಳಿಗೆ ಅವರದೆ ವೃತ್ತಿಗೆ ಹೆಚ್ಚಿನ ಆಧುನಿಕರಣದೊಂದಿಗೆ ಸಾಂಪ್ರದಾಯಿಕ ಕಲೆ ಮತ್ತು ಕರಕುಶಲ ತಯಾರಿಕೆಯ ತಂತ್ರಗಳೊಂದಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು / ಉದ್ಯಮಶೀಲನ್ನಾಗಿಸಲು, ಅವಶ್ಯ ತರಬೇತಿ, ಮಾರುಕಟ್ಟೆ ಸಂಪರ್ಕ ಹಾಗೂ ಸಾಲ ಸೌಲಭ್ಯವನ್ನು ನೀಡುವ ಕಾರ್ಯಕ್ರಮವನ್ನು ರೂಪಿಸಲಾಗಿದೆ.<br><br>• **ಕೊಪ್ಪಳ ಟಾಯ್‌ಕ್ಲಸ್ಟರ್** : ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ಮೆ: Aequs, ಸಹಭಾಗಿತ್ವದಲ್ಲಿ ಆಟಿಕೆ ತಯಾರಿಕಾ ವಲಯದಲ್ಲಿ 8 ಜಾಬ್‌ರೋಲ್‌ಗಳಡಿ ಒಟ್ಟು 300 ಅಭ್ಯರ್ಥಿಗಳಿಗೆ ತರಬೇತಿ ನೀಡುತ್ತೀದೆ.<br><br>• **ಮೇದಾರ ಸಮುದಾಯಕ್ಕೆ ತರಬೇತಿ :** ಕೊಪ್ಪಳ ತಾಲ್ಲೂಕು ಹಾಗೂ ಗಂಗಾವತಿ ತಾಲ್ಲೂಕಿನ ಒಟ್ಟು 100 ಕುಶಲಕರ್ಮಿಗಳಿಗೆ ಬಿದಿರು ಉತ್ಪನ್ನ ತಯಾರಿಕೆಯಲ್ಲಿ ಕೌಶಲ್ಯ ತರಬೇತಿ ಹಾಗೂ ಉದ್ಯಮಶೀಲತಾ ತರಬೇತಿ ನೀಡಲಾಗುತ್ತಿದೆ.<br><br>• **ಕಿನ್ನಾಳ ಆಟಿಕೆ ತಯಾರಿಕೆ ತರಬೇತಿ:** ಚಿತ್ರಗಾರ ಸಮುದಾಯದ ಒಟ್ಟು 100 ಕುಶಲಕರ್ಮಿಗಳಿಗೆ ಸಾಂಪ್ರದಾಯಿಕ ಕಲೆಯಾದ ಮರದ ಆಟಿಕೆ ತಯಾರಿಕೆಯಲ್ಲಿ ತರಬೇತಿ ನೀಡಲಾಗುತ್ತಿದೆ. |

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)**

- ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ನಡೆಯುತ್ತಿರುವ ಕೌಶಲ್ಯಾಧಾರಿತ ತರಬೇತಿಗಳು ಬೇಡಿಕೆಯಾಧಾರಿತವಾಗಿದ್ದು, ಕನಿಷ್ಠ ಶಿಕ್ಷಣವನ್ನು ಪಡೆದಿರುವ ಗ್ರಾಮೀಣ ಸ್ವಸಹಾಯ ಗುಂಪಿನ ನಿರುದ್ಯೋಗಿ ಮಹಿಳೆಯರಿಗೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆಯಡಿ ಒಂದಕ್ಕಿಂತ ಹೆಚ್ಚು ಜೀವನೋಪಾಯ ಚಟುವಟಿಕೆ ತೊಡಗಿಸಿಕೊಳ್ಳುವುದಕ್ಕೆ ಸ್ವಸಹಾಯ ಗುಂಪಿನ ಮಹಿಳೆಯರಿಗೆ ಸಮುದಾಯ ಬಂಡವಾಳ ನಿಧಿ, ಸುತ್ತು ನಿಧಿ, ಬ್ಯಾಂಕ್ ಸಾಲ ಸೌಲಭ್ಯ, ಪಿಎಂಎಫ್‌ಎಂಇ ಯೋಜನೆಯಡಿ ಮೂಲ ಬಂಡವಾಳ ಸೌಲಭ್ಯ, ಕಿರು ಬಂಡವಾಳ ಉದ್ಯಮಗಳನ್ನು ಕೈಗೊಳ್ಳಲು ಸೂಕ್ತ ತರಬೇತಿ ಮತ್ತು ಲಿಂಕೇಜ್, ನರೇಗಾ ಯೋಜನೆ ಸೇರಿದಂತೆ ಇತರ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಕೃಷಿ, ತೋಟಗಾರಿಕೆ ಇತರ ಅವಶ್ಯಕ ಇಲಾಖೆಗಳೊಂದಿಗೆ ಒಗ್ಗೂಡಿಸುವಿಕೆ ಕಾರ್ಯಕ್ರಮದಡಿ ನಿರಂತರವಾಗಿ ಸೌಲಭ್ಯ ಒದಗಿಸಲಾಗುತ್ತಿದೆ. ರಾಜ್ಯದಲ್ಲಿ 29.63 ಲಕ್ಷ ಮಹಿಳೆಯರು ಯೋಜನೆಯ ನಿಯಮಾನುಸಾರ ಮತ್ತು ಅರ್ಹತೆಯ ಅನುಸಾರ ಸೌಲಭ್ಯಗಳನ್ನು ನಿರಂತರವಾಗಿ ಒದಗಿಸಲಾಗುತ್ತಿದೆ.

- ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸಲು ಈಗಾಗಲೇ ಪ್ರತಿ ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಔಪಚಾರಿಕ ಕಿರು ಆಹಾರ ಘಟಕ ಸ್ಥಾಪನೆ ಕಾರ್ಯಕ್ರಮದಡಿ ಅರ್ಹ ಫಲಾನುಭವಿಗಳಿಗೆ ರೂ. 40000/- ಮೂಲ ಬಂಡವಾಳ ನಿಧಿಯನ್ನು ಒದಗಿಸಲಾಗುತ್ತಿದೆ.

- ಮಹಿಳೆಯರಿಗೆ ದೀರ್ಘಕಾಲದ ಉದ್ಯೋಗ ನಿರ್ವಹಿಸಲು ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲಿ ಅವರು ತಯಾರಿಸಿರುವ ಉತ್ಪನ್ನಗಳ ಹೆಚ್ಚಿನ ಬೇಡಿಕೆಗಾಗಿ ಎಫ್.ಎಸ್.ಎಸ್.ಎ.ಐ ಪ್ರಮಾಣ ಪತ್ರ ಮತ್ತು ಗುಣಮಟ್ಟದ ಉತ್ಪನ್ನಗಳಿಗಾಗಿ ಸಾಮರ್ಥ್ಯಾಭಿವೃದ್ಧಿ ತರಬೇತಿಗಳನ್ನು ಹಾಗೂ ತಾಂತ್ರಿಕ ಬೆಂಬಲ ಸಂಸ್ಥೆಗಳ ಒದಗಿಸಲಾಗುತ್ತಿದೆ.

- ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಮಾಸಿಕ ಸಂತೆಗಳನ್ನು ನಡೆಸಲಾಗುತ್ತಿದೆ. ರಾಜ್ಯಮಟ್ಟದಲ್ಲಿ ಉತ್ಪನ್ನಗಳ ಪ್ರದರ್ಶನ ಮಾರಾಟ ಮತ್ತು ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ರೂಪಿಸಲಾಗಿದೆ. ಹಾಗೂ ಇತರೆ ರಾಜ್ಯಗಳಲ್ಲಿ ನಡೆಯುವ ಸರಸ್‌ಮೇಳಗಳಲ್ಲಿ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸುವಂತೆ ಕ್ರಮವಹಿಸಲಾಗುತ್ತಿದೆ.

- ಸನ್ಮಾನ್ಯ ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯದಲ್ಲಿ ಸ್ತ್ರೀಶಕ್ತಿ ಒಕ್ಕೂಟದ ಸದಸ್ಯರು ತಮ್ಮ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಪ್ರಸ್ತುತ 200 ವರ್ಕ್ ಶೆಡ್‌ಗಳನ್ನು ಈಗಾಗಲೇ ನಿರ್ಮಿಸಲಾಗಿದ್ದು, 2022-23ನೇ ಸಾಲಿನಲ್ಲಿ ಹೆಚ್ಚುವರಿಯಾಗಿ 750 ವರ್ಕ್ ಶೆಡ್‌ಗಳನ್ನು ನಿರ್ಮಿಸುವ ಗುರಿಯಡಿ 49 ಪೂರ್ಣಗೊಂಡಿದ್ದು, 268 ಗಳ ನಿರ್ಮಾಣ ಕಾರ್ಯ ಪ್ರಗತಿ ಹಂತದಲ್ಲಿದೆ. ಪ್ರತಿಘಟಕಕ್ಕೆ ಅಂದಾಜು 17.50 ವೆಚ್ಚ ಮಾಡಲಾಗುತ್ತಿದೆ.

- ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಹಾಗೂ MGIRED ಸಹಯೋಗದೊಂದಿಗೆ KSRLPS ಸಂಸ್ಥೆಯು ಕರ್ನಾಟಕದ SHGಗಳ 5993 ಮಹಿಳೆಯರಿಗೆ ಘನತ್ಯಾಜ್ಯ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸೌರಶಕ್ತಿಯ ಬಳಕೆಯಂತಹ ವಿವಿಧ ಅಂಶಗಳಲ್ಲಿ ತರಬೇತಿ ನೀಡಿದೆ. ಗ್ರಾಮ ಪಂಚಾಯತ್‌ನ ಸಹಯೋಗದೊಂದಿಗೆ ಕೆಲಸ ನಿರ್ವಹಿಸಲಾಗುತ್ತಿದೆ. ಪ್ರಸ್ತುತ, 4063 ಜಿಪಿಎಲ್‌ಎಫ್ ಘಟಕಗಳು ಗ್ರಾಮ ಪಂಚಾಯತ್ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿದ್ದು, 12912 ಸ್ವಸಹಾಯ ಗುಂಪಿನ ಮಹಿಳೆಯರು ಕಾರ್ಯನಿರ್ವಹಿಸುತ್ತಿದ್ದಾರೆ. 2165 ಮಹಿಳೆಯರು 4-ಚಕ್ರ ವಾಹನ ಚಾಲನೆಯಲ್ಲಿ ತರಬೇತಿ ಪಡೆದಿದ್ದಾರೆ ಮತ್ತು 992 ಮಹಿಳೆಯರು ವಾಹನ ಚಾಲಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ.

- ಗ್ರಾಮೀಣ ಭಾಗದ ಮಹಿಳೆಯರಿಗೆ ಆರ್ಥಿಕ ಸಾಕ್ಷರತೆ ಜಾಗೃತಿ ಶಿಕ್ಷಣ ನೀಡುವುದರೊಂದಿಗೆ ಘನ ಸರ್ಕಾರದ ಉತ್ಕಟ ಇಚ್ಛೆಯಂತೆ ಅವರ ಮನೆ ಬಾಗಿಲಿಗೆ ಬ್ಯಾಂಕಿಂಗ್ ಸೌಲಭ್ಯ ನೀಡಲು ಸ್ವಸಹಾಯ ಗುಂಪಿನ ಮಹಿಳೆಯರಿಗೆ IIBF ತರಬೇತಿಯನ್ನು ನೀಡಿ ಪ್ರತಿಯೊಂದು ಗ್ರಾಮ ಪಂಚಾಯಿತಿ ಮಟ್ಟದಲ್ಲಿ Business Correspondence Sakhi (B.C sakhi) ಯರನ್ನು ನಿಯೋಜಿಸಿ ಅನುಕೂಲ ಒದಗಿಸಲಾಗುತ್ತಿದೆ.

| | |
|---|---|
| | • ಸನ್ಮಾನ್ಯ ಮುಖ್ಯಮಂತ್ರಿಗಳು ಅಯವ್ಯದಲ್ಲಿ ಘೋಷಿಸಿದಂತೆ ಪ್ರತಿಯೊಂದು ತಾಲೂಕಿನಲ್ಲಿ ಸ್ವಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆಗಾಗಿ 226 ತಾಲ್ಲೂಕು ಸ್ತ್ರೀ-ಸಾಮರ್ಥ್ಯ ಮಳಿಗೆಗಳನ್ನು (kiosk) ಸ್ಥಾಪಿಸಲಾಗುತ್ತಿದ್ದು, 72 ತಾಲ್ಲೂಕುಗಳಲ್ಲಿ ಸ್ಥಳ ಗುರುತಿಸಿ ಸ್ಥಾಪನೆಯ ಕ್ರಮ ಕೈಗೊಳ್ಳಲಾಗುತ್ತಿದೆ.<br><br>• ಡಿಡಿಯು-ಜಿಕೆವೈ ಮತ್ತು ಆರ್‌ಸೆಟಿ ಕಾರ್ಯಕ್ರಮಗಳ ತರಬೇತಿಗಳ ಕುರಿತು ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳು ಕುಟುಂಬ ಸಮೀಕ್ಷೆ ಮೂಲಕ ಅರ್ಹರನ್ನು ಗುರುತಿಸಿ ತರಬೇತಿ ಹಾಗೂ ಉದ್ಯೋಗ ಕೈಗೊಳ್ಳಲು ಬೆಂಬಲಿಸಲಾಗುತ್ತಿದೆ.<br><br>• ಸನ್ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯದಲ್ಲಿ ಘೋಷಿಸಿದಂತೆ ಸ್ತ್ರೀ ಸಾಮರ್ಥ್ಯ ಯೋಜನೆಯಡಿಯ ರೂ.500.00 ಕೋಟಿಗಳ ಅನುದಾನವನ್ನು ಮೀಸಲಿರಿಸಿದ್ದು, ಯೋಜನಯಡ ಸ್ವಸಹಾಯ ಗುಂಪುಗಳಿಗೆ ತಲಾ ರೂ. 1.00 ಲಕ್ಷದಂತೆ ಸಮುದಾಯ ಬಂಡವಾಳ ನಿಧಿಯನ್ನು ಒದಗಿಸಿ 50000 ಫಲಾನುಭವಿಗಳಿಗೆ ಸ್ವ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸಲು ಅನುಕೂಲ ಒದಗಿಸಲಾಗುತ್ತಿದೆ. ಈ ಯೋಜನೆಯ ಅನುಷ್ಠಾನದ ಪ್ರಗತಿ ಕೆಳಗಿನಂತಿದೆ.<br><br>• ಸ್ತ್ರೀ ಸಾಮರ್ಥ್ಯ ಯೋಜನೆಯಡಿ ಗುಂಪು ಉದ್ಯಮ ಯೋಜನೆಯಡಿ ಜಿಲ್ಲೆಗೊಂದು ಸ್ಯಾನಿಟರಿ ಪ್ಯಾಡ್‌ಗಳ ಪೂರೈಕೆ ಹಾಗೂ ಚುಕ್ಕಿ ಘಟಕ ಸ್ಥಾಪನೆ ಮತ್ತು ಪ್ರತಿ ತಾಲ್ಲೂಕಿಗೊಂದು ಸರ್ಕಾರಿ ಕಛೇರಿಗಳಲ್ಲಿ ಕ್ಯಾಂಟೀನ್ ಸೌಲಭ್ಯ ಕಲ್ಪಿಸಲು ಸ್ವಸಹಾಯ ಗುಂಪಿನ ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಸ್ತ್ರೀ ಸಾಮರ್ಥ್ಯ ಯೋಜನೆಯಡಿ 15 ವೈಯಕ್ತಿಕ ಉದ್ಯಮೆ ವಲಯಗಳಿಗೆ ಆಯ್ಕೆಯಾಗಿರುವ ರಾಜ್ಯಾದ್ಯಾಂತ 77352 ಬಿಸಿನೆಸ್ ಡೆವೆಲಪೆಂಟ್ ಪ್ಲಾನ್‌ಗಳನ್ನು ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳು ಅಂಗೀಕಾರ ನೀಡಿ ಅನುಷ್ಠಾನಕ್ಕೆ ಕ್ರಮ ಜರುಗಿಸಲಾಗುತ್ತಿದೆ. ಸ್ತ್ರೀ ಸಾಮರ್ಥ್ಯ ಯೋಜನೆಯಡಿ ಅನುಷ್ಠಾನಗೊಳಿಸಲು ಕ್ರಮ ಜರುಗಿಸಲಾಗುತ್ತಿದೆ.<br><br>• **ಸ್ತ್ರೀ ಸಾಮರ್ಥ್ಯ** ಯೋಜನೆಯಡಿ ಗುರುತಿಸಲಾಗಿರುವ 50000 ಫಲಾನುಭವಿಗಳಿಗೆ ಅವರ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಬ್ಯಾಂಕ್ ಲಿಂಕೇಜ್ (ಬ್ಯಾಂಕ್ ಸಾಲ ಸೌಲಭ್ಯ) ಒದಗಿಸಲಾಗಿದ್ದು, 29954 ಸ್ವ-ಸಹಾಯ ಗುಂಪಿಗಳಿಗೆ ಪ್ರತ್ಯೇಕವಾಗಿ 2ನೇ ಹಂತದ ಸಾಲ ಸೌಲಭ್ಯಕ್ಕಾಗಿ ಅರ್ಜಿಗಳನ್ನು ಸಲ್ಲಿಸಿ Anchor Bank ಮೂಲಕ ಕ್ರಮ ಜರುಗಿಸಲಾಗುತ್ತಿದೆ.<br><br>ಒಟ್ಟಾರೆ ಗ್ರಾಮೀಣ ಭಾಗದ ಬಡತನ ರೇಖೆಯ ಕುಟುಂಬಗಳು ಆರ್ಥಿಕವಾಗಿ ಸಬಲತೆಯತ್ತ ಪ್ರಗತಿ ಹೊಂದಲು ಸಂಜೀವಿನಿ -ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯು ಸ್ವಸಹಾಯ ಗುಂಪುಗಳು ಮತ್ತು ಸಮುದಾಯ ಆಧಾರಿತ ಸಂಸ್ಥೆಗಳ ಬಲವರ್ಧನೆಗೆ ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ಅರ್ಹ ಪ್ರತಿಯೊಂದು ಕುಟುಂಬವು ಒಂದಕ್ಕಿಂತ ಹೆಚ್ಚು ಜೀವನೋಪಾಯ ಸ್ವ-ಉದ್ಯೋಗಗಳನ್ನು ದೀರ್ಘಾವಧಿಗೆ ಹೊಂದುವಲ್ಲಿ ದೂರದೃಷ್ಟಿಯ ಪರಿಕಲ್ಪನೆಯೊಂದಿಗೆ ನಿರಂತರ ಶ್ರಮಿಸುತ್ತಿದೆ. |

ಸಂಖ್ಯೆ: ಕೌಉಜೀಇ 4 ಕೌಗುಪ್ರ 2023

(ಡಾ|| ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ
ಮತ್ತು ಜೀವನೋಪಾಯ ಇಲಾಖಾ ಸಚಿವರು.